**Akashvani : Bangalore**
**National Bulletin In Kannada**
**07.04.2024 / 7.35 am**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**07.04.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಲೋಕಸಭಾ ಚುನಾವಣೆ: ಬಿಹಾರದ ನವಾಡಾದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಚುನಾವಣಾ ರ್‍ಯಾಲಿಯನ್ನುದ್ದೇಶಿ ಭಾಷಣ

೨. ಕಳೆದ ಹತ್ತು ವರ್ಷಗಳಲ್ಲಿ ದೇಶದ ಅಭಿವೃದ್ಧಿಗೆ ಕೈಗೊಂಡ ಕ್ರಮಗಳು ಕೇವಲ ಆರಂಭ - ಪ್ರಧಾನಿ

೩. ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಸೇರಿ ಐವರು ರಾಜ್ಯಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕಾರ

೪. ಐಪಿಎಲ್ ಕ್ರಿಕೆಟ್ : ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ರಾಜಸ್ಥಾನ ರಾಯಲ್ಸ್ ಗೆ ೬ ವಿಕೆಟ್ ಜಯ

**<><*<><>*><>**

ಭಾರತೀಯ ಹವಾಮಾನ ಇಲಾಖೆ ನಿನ್ನೆ ಕೇರಳದ ವಿವಿಧ ಜಿಲ್ಲೆಗಳಲ್ಲಿ ಯೆಲ್ಲೊ ಎಚ್ಚರಿಕೆ ನೀಡಿದ್ದು, ಇದೇ ೬ ರಿಂದ ೧೦ ರವರೆಗೆ ತೀವ್ರ ತಾಪಮಾನ ಹಾಗೂ ಜನರಿಗೆ ಸವಾಲಿನ ಪರಿಸ್ಥಿತಿಗಳು ಎದುರಾಗುವ ಕುರಿತು ಮುನ್ಸೂಚನೆ ನೀಡಿದೆ. ಹವಾಮಾನ ಇಲಾಖೆಯ ಪ್ರಕಾರ, ಕೊಲ್ಲಂ ಮತ್ತು ಪಾಲಕ್ಕಾಡ್ ಜಿಲ್ಲೆಗಳಲ್ಲಿ ಗರಿಷ್ಠ ತಾಪಮಾನವು ೪೦ ಡಿಗ್ರಿ ಸೆಲ್ಸಿಯಸ್ ಇರಲಿದೆ.

**<><*<><>*><>**

ಲೋಕಸಭಾ ಚುನಾವಣೆಯ ಮೊದಲೆರಡು ಹಂತಗಳಿಗೆ ಮತದಾನ ಸನಿಹಗೊಳ್ಳುತ್ತಿರುವ ಕಾರಣ ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ದೇಶಾದ್ಯಂತ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಬಿಹಾರದ

ನವಾಡಾದಲ್ಲಿ ಇಂದು ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಿಜೆಪಿ ನಾಯಕರೊಂದಿಗೆ ಎನ್ ಡಿಎಯ ಇತರ ಘಟಕ ಪಕ್ಷಗಳ ಸದಸ್ಯರು ಸಹ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಬಿಹಾರದಲ್ಲಿ ಒಂದು ವಾರದೊಳಗೆ ಪ್ರಧಾನಿ ಅವರ ಎರಡನೇ ಚುನಾವಣಾ ರಾಲಿ ಇದಾಗಿದೆ. ಇದಕ್ಕೂ ಮುನ್ನ ಏಪ್ರಿಲ್ ೪ ರಂದು ಬಿಜೆಪಿಯ ಸ್ಟಾರ್ ಪ್ರಚಾರಕರಾಗಿರುವ ಪ್ರಧಾನಿ ನರೇಂದ್ರ ಮೋದಿ ಜಮುಯಿ ಕ್ಷೇತ್ರದಿಂದ ಎನ್ ಡಿಎ ಲೋಕಸಭಾ ಚುನಾವಣಾ ಪ್ರಚಾರವನ್ನು ಪ್ರಾರಂಭಿಸಿದ್ದರು. ನವಾಡಾದಲ್ಲಿ ಪ್ರಧಾನಿ ಅವರ ಕಾರ್ಯಕ್ರಮವನ್ನು ಗಮನದಲ್ಲಿಟ್ಟುಕೊಂಡು ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಮೊದಲ ಹಂತದಲ್ಲಿ ಗಯಾ, ಔರಂಗಾಬಾದ್ ಮತ್ತು ಜಮುಯಿ ಜೊತೆಗೆ ನವಾಡಾ ಲೋಕಸಭಾ ಕ್ಷೇತ್ರದಲ್ಲಿ ಇದೇ ೧೯ ರಂದು ಮತದಾನ ನಡೆಯಲಿದೆ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಇಂದು ಮಧ್ಯಪ್ರದೇಶದ ಜಬಲ್‌ಪುರ ಕ್ಷೇತ್ರದಲ್ಲಿ ರೋಡ್ ಶೋ ನಡೆಸುವ ಮೂಲಕ ಲೋಕಸಭಾ ಚುನಾವಣೆಯ ಬಿಜೆಪಿ ಪ್ರಚಾರಕ್ಕೆ ಚಾಲನೆ ನೀಡಲಿದ್ದಾರೆ. ೧.೨ ಕಿ.ಮೀ ಉದ್ದದ ರೋಡ್ ಶೋ ಸಂಜೆ ಶಹೀದ್ ಭಗತ್ ಸಿಂಗ್ ಕ್ರಾಸಿಂಗ್ ನಿಂದ ಪ್ರಾರಂಭವಾಗಿ ಜಬಲ್ ಪುರದ ಗೋರಖ್ ಪುರ ಪ್ರದೇಶದ ಆದಿ ಶಂಕರಾಚಾರ್ಯ ಕ್ರಾಸಿಂಗ್ ನಲ್ಲಿ ಕೊನೆಗೊಳ್ಳುತ್ತದೆ. ಬಾಲಾಘಾಟ್ ಮತ್ತು ಜಬಲ್ ಪುರ ಎರಡೂ ಕ್ಷೇತ್ರಗಳು ಮಧ್ಯಪ್ರದೇಶದ ಮಹಾಕೋಶಲ್ ಪ್ರದೇಶದ ವ್ಯಾಪ್ತಿಗೆ ಬರಲಿವೆ. ಇದು ಗಣನೀಯ ಬುಡಕಟ್ಟು ಮತಗಳನ್ನು ಹೊಂದಿದೆ. ಮಧ್ಯಪ್ರದೇಶದ ೨೯ ಲೋಕಸಭಾ ಸ್ಥಾನಗಳಲ್ಲಿ ೨೦೧೯ ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಬಹುದಾದ ಏಕೈಕ ಸ್ಥಾನವಾದ ಚಿಂದ್ವಾರಾ ಕೂಡ ಈ ಪ್ರದೇಶದ ವ್ಯಾಪ್ತಿಗೆ ಬರುತ್ತದೆ. ಈ ಕ್ಷೇತ್ರಗಳಲ್ಲಿ ಇದೇ ತಿಂಗಳ ೧೯ ರಂದು ಮತದಾನ ನಡೆಯಲಿದೆ.

**<><*<><>*><>**

ಕಾಂಗ್ರೆಸ್ ಪ್ರಣಾಳಿಕೆಯನ್ನು ಸುಳ್ಳಿನ ಕಂತೆ ಎಂದು ಬಣ್ಣಿಸಿರುವ ಪ್ರಧಾನಿ ಮತ್ತು ಬಿಜೆಪಿ ಹಿರಿಯ ಮುಖಂಡ ನರೇಂದ್ರ ಮೋದಿ, ತಮ್ಮ ಮೂರನೇ ಅವಧಿ ದೂರವಿಲ್ಲ ಮತ್ತು ಬಿಜೆಪಿ ಸರ್ಕಾರವು ಭ್ರಷ್ಟಾಚಾರದ ವಿರುದ್ಧ ಮೊದಲ ೧೦೦ ದಿನಗಳಲ್ಲಿ ದೊಡ್ಡ ನಿರ್ಧಾರಗಳನ್ನು ತೆಗೆದುಕೊಳ್ಳಲಿದೆ ಎಂದು ಘೋಷಿಸಿದ್ದಾರೆ. ರಾಜಸ್ಥಾನದ ಪುಷ್ಕರ್ ನಲ್ಲಿ ನಿನ್ನೆ ಚುನಾವಣಾ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಕಳೆದ ಹತ್ತು ವರ್ಷಗಳಲ್ಲಿ ಕೈಗೊಂಡ ಕ್ರಮಗಳು ಕೇವಲ ಆರಂಭವಷ್ಟೇ ಮಾಡಬೇಕಾದದ್ದು ಬಹಳಷ್ಟಿದೆ. ಕಾಂಗ್ರೆಸ್ ಪ್ರಣಾಳಿಕೆಯ ಪ್ರತಿಯೊಂದು ಪುಟವೂ ದೇಶವನ್ನು

ವಿಭಜಿಸುವ ವಾಸನೆಯನ್ನು ಹೊಂದಿದೆ ಎಂದು ಪ್ರಧಾನಿ ಹೇಳಿದ್ದಾರೆ. ಇಂದಿನ ಕಾಂಗ್ರೆಸ್ ನಲ್ಲಿ ತತ್ವಗಳು ಅಥವಾ ನೀತಿಗಳು ಉಳಿದಿಲ್ಲ.ಆದರೆ ನವ ಭಾರತ ನಿರ್ಮಾಣಕ್ಕೆ ಬಿಜೆಪಿ ಬದ್ಧವಾಗಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು.

<><*<><>*><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ನಿನ್ನೆ ಕೇರಳದ ಕೋಯಿಕ್ಕೋಡ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಂ.ಟಿ.ರಮೇಶ್ ಅವರನ್ನು ಬೆಂಬಲಿಸಿ ರೋಡ್ ಶೋ ನಡೆಸಿದರು. ರೋಡ್ ಶೋ ನಂತರ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ನಡ್ಡಾ, ವಿರೋಧ ಪಕ್ಷದ ನಾಯಕರು ಜೈಲಿನಲ್ಲಿರುವುದರಿಂದ ಅಥವಾ ಜಾಮೀನಿನ ಮೇಲೆ ಇರುವುದರಿಂದ ಪ್ರತಿಪಕ್ಷಗಳು ಸೂಕ್ತ ನಾಯಕರಿಲ್ಲದೆ ಪರದಾಡುತ್ತಿವೆ. ಕೇರಳದಲ್ಲಿ ಯುಡಿಎಫ್ ಮತ್ತು ಎಲ್ ಡಿಎಫ್ ಎರಡೂ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ಎಂದು ಅವರು ಹೇಳಿದರು. ಇಬ್ಬರೂ ಭ್ರಷ್ಟಾಚಾರದಲ್ಲಿ ಮಾತ್ರ ಆಸಕ್ತಿ ಹೊಂದಿದ್ದಾರೆ. ರಾಜ್ಯದಲ್ಲಿ "ಲೂಟೋಕ್ರಸಿ" ಮೇಲುಗೈ ಸಾಧಿಸಿದೆ ಎಂದು ಗಮನಿಸಿದ ಬಿಜೆಪಿ ನಾಯಕ, ಎರಡೂ ರಂಗಗಳು ಸ್ಥಳೀಯವಾಗಿ ಪರಸ್ಪರ ಹೋರಾಡುತ್ತಿದ್ದರೂ, ರಾಷ್ಟ್ರೀಯ ಮಟ್ಟದಲ್ಲಿ ಅವರು ಕೈಜೋಡಿಸಿರುವುದು ಬೂಟಾಟಿಕೆ ಮತ್ತು ಸೈದ್ಧಾಂತಿಕ ಗೊಂದಲವನ್ನು ಉಂಟುಮಾಡುತ್ತದೆ ಎಂದು ಹೇಳಿದರು.

<><*<><>*><>

ನಮ್ಮ ದೇಶದ ಗಡಿಗಳು ಸಂಪೂರ್ಣವಾಗಿ ಸುರಕ್ಷಿತವಾಗಿವೆ ಎಂದು ರಕ್ಷಣಾ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ರಾಜನಾಥ್ ಸಿಂಗ್ ದೇಶವಾಸಿಗಳಿಗೆ ಭರವಸೆ ನೀಡಿದ್ದಾರೆ. ಮಧ್ಯಪ್ರದೇಶದ ಸಿಂಗ್ರೌಲಿಯಲ್ಲಿ ನಿನ್ನೆ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಒಂದಲ್ಲ ಒಂದು ರಾಜ್ಯದಲ್ಲಿ ಭಯೋತ್ಪಾದಕ ಘಟನೆಗಳು ನಡೆಯುತ್ತಿದ್ದವು, ಆದರೆ ನಮ್ಮ ಸರ್ಕಾರ ಅವುಗಳನ್ನು ಬಲವಾಗಿ ನಿಲ್ಲಿಸಿದೆ ಎಂದು ಹೇಳಿದ್ದಾರೆ. ಪ್ರತಿಪಕ್ಷಗಳನ್ನು ದೂಷಿಸಿದ ಅವರು, ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ನಾಯಕರು ಜನರ ನಡುವೆ ಭಿನ್ನಾಭಿಪ್ರಾಯಗಳನ್ನು ಬಿತ್ತುತ್ತಿವೆ ಎಂದು ಆರೋಪಿಸಿದ್ದಾರೆ.

<><*<><>*><>

ಬಿಜೆಪಿ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಸೇರಿದಂತೆ, ರಾಜ್ಯಸಭೆಗೆ ನೂತನವಾಗಿ ಆಯ್ಕೆಯಾದ ಐವರು ಸದಸ್ಯರು ನಿನ್ನೆ ಪ್ರಮಾಣ ವಚನ ಸ್ವೀಕರಿಸಿದರು. ರಾಜ್ಯಸಭೆಯ ಸಭಾಪತಿಗಳೂ ಆದ

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಪಾರ್ಲಿಮೆಂಟ್ ಹೌಸ್‌ನಲ್ಲಿ ನೂತನ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದರು. ಬಿಜೆಪಿಯ ಅಶೋಕರಾವ್ ಶಂಕರ್‌ರಾವ್ ಚವ್ಹಾಣ್, ಚುನ್ನೀಲಾಲ್ ಗರಾಸಿಯಾ, ಎಐಟಿಸಿ ಯ ಮೊಹಮ್ಮದ್ ನದೀಮುಲ್ ಹಕ್, ಕಾಂಗ್ರೆಸ್ ನ ಅನಿಲ್ ಕುಮಾರ್ ಯಾದವ್ ಪ್ರಮಾಣ ವಚನ ಸ್ವೀಕರಿಸಿದರು.

<><*<><>*><>

ಸಿಪಿಐ (ಮಾವೋವಾದಿ) ಭಾರತ ವಿರೋಧಿ ಪಿತೂರಿ ಪ್ರಕರಣದಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ ನಿನ್ನೆ ಉತ್ತರ ಪ್ರದೇಶ ಮತ್ತು ಬಿಹಾರದ ಅನೇಕ ಸ್ಥಳಗಳ ಮೇಲೆ ದಾಳಿ ನಡೆಸಿದೆ. ಮೂಲತಃ ಉತ್ತರ ಪ್ರದೇಶದ ಭಯೋತ್ಪಾದನಾ ನಿಗ್ರಹ ದಳ ದಾಖಲಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್‌ಐಎ ತಂಡಗಳು ಉತ್ತರ ಪ್ರದೇಶದ ಬಲ್ಲಿಯಾ ಜಿಲ್ಲೆಯ ೧೧ ಸ್ಥಳಗಳಲ್ಲಿ ಮತ್ತು ಬಿಹಾರದ ಕೈಮೂರ್ ಜಿಲ್ಲೆಯ ಒಂದು ಸ್ಥಳದಲ್ಲಿ ಆರೋಪಿಗಳು ಮತ್ತು ಶಂಕಿತ ವ್ಯಕ್ತಿಗಳ ಆವರಣದಲ್ಲಿ ಶೋಧ ನಡೆಸಿವೆ.

<><*<><>*><>

ಜೈಪುರದಲ್ಲಿ ನಡೆದ ರಾಲಿಯಲ್ಲಿ ಜಮ್ಮು ಮತ್ತು ಕಾಶ್ಮೀರದ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿದ ಹೇಳಿಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ತಿರುಗೇಟು ನೀಡಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿಪ್ರತಿಕ್ರಿಯಿಸಿರುವ ಸಚಿವರು, ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಾಗಿದೆ ಮತ್ತು ಜಮ್ಮು ಮತ್ತು ಕಾಶ್ಮೀರದ ಜನರಿಗೆ ಭಾರತದ ಉಳಿದ ಭಾಗಗಳ ಮೇಲೆ ಹಕ್ಕಿರುವಂತೆಯೇ ಪ್ರತಿಯೊಬ್ಬ ರಾಜ್ಯ ಮತ್ತು ನಾಗರಿಕರಿಗೆ ಜಮ್ಮು ಮತ್ತು ಕಾಶ್ಮೀರದ ಮೇಲೆ ಹಕ್ಕಿದೆ ಎಂದು ಕಾಂಗ್ರೆಸ್ ಪಕ್ಷಕ್ಕೆ ನೆನಪಿಸಲು ಬಯಸುತ್ತೇನೆ ಎಂದು ಹೇಳಿದ್ದಾರೆ. ಕಾಶ್ಮೀರದಲ್ಲಿ ಶಾಂತಿ ಮತ್ತು ಭದ್ರತೆಗಾಗಿ ರಾಜಸ್ಥಾನದ ಅನೇಕ ಧೈರ್ಯಶಾಲಿ ಪುತ್ರರು ತಮ್ಮ ಪ್ರಾಣವನ್ನು ತ್ಯಾಗ ಮಾಡಿದ್ದಾರೆ ಎಂಬುದು ಕಾಂಗ್ರೆಸ್ ಗೆ ತಿಳಿದಿಲ್ಲ. ಇಂತಹ ಹೇಳಿಕೆಗಳು ರಾಷ್ಟ್ರದ ಏಕತೆ ಮತ್ತು ಸಮಗ್ರತೆಯ ಬಗ್ಗೆ ಕಾಳಜಿ ವಹಿಸುವ ಪ್ರತಿಯೊಬ್ಬ ದೇಶಭಕ್ತ ನಾಗರಿಕನನ್ನು ನೋಯಿಸುತ್ತವೆ ಎಂದು ಅಮಿತ್ ಶಾ ಹೇಳಿದ್ದಾರೆ.

<><*<><>*><>

ಭಾರತದ ಪ್ರಜಾತಂತ್ರ, ಆರಂಭದಿಂದಲೂ ಸಾರ್ವತ್ರಿಕ ವಯಸ್ಕ ಮತದಾನಕ್ಕೆ ಹೆಸರಾಗಿದೆ. ಮತದಾನ ಪ್ರಕ್ರಿಯೆ ಭಾಗಿದಾರಿಯಲ್ಲಿ ಲಿಂಗಸಮಾನತೆಯ ಪಯಣ ವಿಶಿಷ್ಟವಾಗಿದೆ. ೧೯೫೨ರಲ್ಲಿ

ನಡೆದ ಮೊದಲ ಸಾರ್ವತ್ರಿಕ ಚುನಾವಣೆಯಲ್ಲಿ ಸುಮಾರು ೮೦ ಲಕ್ಷ ಮಹಿಳಾ ಮತದಾರರು ಇದ್ದರು. ಇವರಲ್ಲಿ ೨ ಲಕ್ಷ ೮೦ ಸಾವಿರ  ಮತದಾರರಿಗೆ ಗುರುತಿನ ವಿವರ ಇರಲಿಲ್ಲ. ಇದು ಚುನಾವಣಾ ಆಯೋಗಕ್ಕೆ ಒಂದು ವಿಶಿಷ್ಟವಾದ ಸವಾಲಾಗಿತ್ತು. ಅನೇಕ ಮಹಿಳೆಯರು ಆಗಿನ ಸಂಪ್ರದಾಯದಂತೆ ತಮ್ಮ ಕುಟುಂಬದ ಪುರುಷ ಸದಸ್ಯರ ಹೆಸರಿನ ಅಡಿಯಲ್ಲಿ ತಮ್ಮ ಹೆಸರನ್ನು ನೊಂದಾವಣೆ ಮಾಡಿಸಿದ್ದರು ಆದರೆ ಈಗ ಚಿತ್ರಣ ಬದಲಾಗಿದೆ. ೨೦೧೯ ರ ಲೋಕಸಭಾ ಚುನಾವಣೆಯಲ್ಲಿ ಶೇಕಡ ೬೭.೧೮ ರಷ್ಟು ದಾಖಲೆಯ ಸಂಖ್ಯೆ ಮಹಿಳೆಯರು ಮತದಾನ ಮಾಡಿದ್ದಾರೆ. ಚುನಾವಣಾ ಆಯೋಗ, ಚುನಾವಣೆಯಲ್ಲಿ ಎಲ್ಲ ಮತದಾರರ ಪಾಲ್ಗೊಳ್ಳುವಿಕೆ ಖಾತರಿಪಡಿಸಲು ವ್ಯಾಪಕ ಕ್ರಮಕೈಗೊಂಡ ಕಾರಣ ಇದು ಸಾಧ್ಯವಾಗಿದೆ. ಬುಡಕಟ್ಟು ಜಿಲ್ಲೆಗಳಲ್ಲಿ ಮಹಿಳಾ ಮತದಾರರ ರ‍್ಯಾಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಮದರ್ ಇಂಡಿಯಾ ಮೊದಲಾದ ಕಾರ್ಯಕ್ರಮಗಳ ಮೂಲಕ ಮಹಿಳಾ ಮತದಾರರಿಗೆ ಶಿಕ್ಷಣ ನೀಡಲಾಗಿದೆ. ೨೦೨೪ ಲೋಕಸಾಭಾ ಚುನಾವಣೆ ಭಾರತದ ಪ್ರಜಾತಂತ್ರ ಇತಿಹಾಸದಲ್ಲಿ ಅತಿ ಪ್ರಮುಖವಾದ ಘಟ್ಟವಾಗಿದೆ. ೪೭ ಕೋಟಿ ೧ ಲಕ್ಷ ಮಹಿಳಾ ಮತದಾರರು ಮತದಾನಕ್ಕೆ ಹೆಸರು ನೊಂದಾಯಿಸಿಕೊಂಡಿದ್ದಾರೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ.

<><*<><>*><>

ಕೆನಡಾದ ಟೊರಾಂಟೊದಲ್ಲಿ ನಡೆಯುತ್ತಿರುವ ಕ್ಯಾಂಡಿಡೇಟ್ಸ್ ಚೆಸ್ ಟೂರ್ನಿಯಲ್ಲಿ ಭಾರತದ ವಿದಿತ್ ಗುಜರಾತಿ ಮತ್ತು ಗುಕೇಶ್ ಗೆಲುವು ದಾಖಲಿಸಿದ್ದಾರೆ. ನಿನ್ನೆ ನಡೆದ ಪುರುಷರ ವಿಭಾಗದ ಎರಡನೇ ಸುತ್ತಿನಲ್ಲಿ ಅಮೆರಿಕದ ಹಿಕಾರು ನಕಮುರ ವಿರುದ್ಧ ಜಯ ಗಳಿಸಿದ ವಿದಿತ್ ಪೂರ್ಣ ಒಂದು ಅಂಕ ಗಳಿಸಿದರು. ಆದರೆ ಆರ್. ಪ್ರಜ್ಞಾನಂದ ಸ್ವದೇಶಿ ಮಿತ್ರ ಗುಕೇಶ್ ವಿರುದ್ಧ ಸೋತು ನಿರಾಸೆ ಅಭವಿಸಿದರು.

<><*<><>*><>

ಜೈಪುರದ ಸವಾಯಿ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡ ೬ ವಿಕೆಟ್ ಗಳಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸೋಲಿಸಿದೆ. ಇದರೊಂದಿಗೆ ಆಡಿದ ನಾಲ್ಕು ಪಂದ್ಯಗಳಲ್ಲಿ ಅಜೇಯ ದಾಖಲೆ ಕಾಯ್ದುಕೊಂಡಿರುವ ರಾಜಸ್ಥಾನ, ಒಟ್ಟು ೮ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಮುಂದುವರಿದಿದೆ. ಸತತ ಮೂರನೇ ಸೋಲಿಗೆ ಗುರಿಯಾಗಿರುವ ರಾಯಲ್ ಚಾಲೆಂಜರ್ಸ್ ಆಡಿದ ಐದು ಪಂದ್ಯಗಳಲ್ಲಿ ಕೇವಲ ೨ ಅಂಕ ಹೊಂದಿದ್ದು, ಪಟ್ಟಿಯಲ್ಲಿ ೮ನೇ ಸ್ಥಾನದಲ್ಲಿದೆ. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಮುಂಬೈನಲ್ಲಿ ಮಧ್ಯಾಹ್ನ ಮುಂಬೈ ಇಂಡಿಯನ್ಸ್ ಮತ್ತು ಡೆಲ್ಲಿಕ್ಯಾಪಿಟಲ್ಸ್

ಹಾಗೂ ಲಖನೌದಲ್ಲಿ ರಾತ್ರಿ ಲಖನೌ ಸೂಪರ್ ಜಯಂಟ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಎದುರಾಗಲಿವೆ.